ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕಬಿನಿ ಜಲಾಶಯದ ಕೆಳಗೆ ಉದ್ಯಾನವನ ನಿರ್ಮಾಣ

ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

408 (422) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಬಿನಿ ಜಲಾಶಯದ ಹಿಂಭಾಗದಲ್ಲಿ ಪಾಳು ಬಿದ್ದಿರುವ 75 ಎಕರೆ ಪ್ರದೇಶದಲ್ಲಿ ಉದ್ಯಾನವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಈ ಉದ್ಯಾನವನ ನಿರ್ಮಾಣಕ್ಕೆ 100 ಕೋಟಿ ರೂ. ಒದಗಿಸುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಯವರು ಭರವಸೆ ನೀಡಿದ್ದಾರೆಯೇ;

(ಆ) ಕಬಿನಿ ಜಲಾಶಯದ ಹಿಂಭಾಗದ ಈ ಪ್ರದೇಶದಲ್ಲಿ ಭವ್ಯವಾದ ಆಕರ್ಷಕ ಉದ್ಯಾನವನ ನಿರ್ಮಿಸಿ ಪ್ರವಾಸಿ ಧಾಮವನ್ನಾಗಿ ರೂಪಿಸಲು ಕ್ರಮ ಜರುಗಿಸಲಾಗುವುದೇ ?